ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೇಂದ್ರ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 31/10/2019

# ಆದಾಯ ತೆರಿಗೆ ಕಡಿತ ಇಲ್ಲ

ನವದೆಹಲಿ (ಪಿಟಿಐ): ವೈಯಕ್ತಿಕ ಆದಾಯ ತೆರಿಗೆ ಕಡಿತಗೊಳಿಸುವ ಮತ್ತು ತೆರಿಗೆ ಹಂತಗಳಲ್ಲಿ ರಿಯಾಯ್ತಿಗಳನ್ನು ನೀಡುವ ಯಾವುದೇ ಪ್ರಸ್ತಾವ ಸದ್ಯಕ್ಕೆ ಇಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ.

ತೆರಿಗೆ ಸಂಗ್ರಹ ಪ್ರಮಾಣ ಕಡಿಮೆಯಾಗಿರುವುದರಿಂದ ಉದ್ಭವಿಸಿರುವ ಹಣಕಾಸು ಸಂಕಷ್ಟ ಮತ್ತು ಮಂದಗತಿಯ ಆರ್ಥಿಕತೆಯ ಕಾರಣಕ್ಕೆ ವೈಯಕ್ತಿಕ ಆದಾಯ ತೆರಿಗೆ ದರ ಕಡಿತಗೊಳಿಸಲು ಸದ್ಯದ ಪರಿಸ್ಥಿತಿಯಲ್ಲಿ ಸಾಧ್ಯವಿಲ್ಲ ಎಂದು ತಿಳಿಸಿದೆ.

ಆರ್ಥಿಕತೆಗೆ ಉತ್ತೇಜನ ನೀಡುವ ಕ್ರಮಗಳ ಅಂಗವಾಗಿ, ಕಾರ್ಪೊರೇಟ್ ತೆರಿಗೆಯನ್ನು ಸೆಪ್ಟೆಂಬರ್‌ನಲ್ಲಿ ತಗ್ಗಿಸಲಾಗಿತ್ತು. ಹೀಗಾಗಿ ವೈಯಕ್ತಿಕ ಆದಾಯ ತೆರಿಗೆಯಲ್ಲಿಯೂ ಸರ್ಕಾರ ಕೆಲಮಟ್ಟಿಗೆ ರಿಯಾಯ್ತಿ ಪ್ರಕಟಿಸಿ, ಬೇಡಿಕೆ ಹೆಚ್ಚಿಸಲು ಉತ್ತೇಜನ ನೀಡುವ ಸಾಧ್ಯತೆ ಇದೆ ಎಂದು ನಿರೀಕ್ಷಿಸಲಾಗಿತ್ತು. ಈ ಬಗ್ಗೆ ಸರ್ಕಾರದ ಮೇಲೆ ಒತ್ತಡವೂ ಹೆಚ್ಚಾಗಿತ್ತು.

ಹಲವಾರು ಸಾಮಾಜಿಕ ಸುರಕ್ಷತಾ ಯೋಜನೆಗಳಿಗೆ ಹಣ ವೆಚ್ಚ ಮಾಡಲು ಸರ್ಕಾರಕ್ಕೆ ಹೆಚ್ಚಿನ ವರಮಾನದ ಅಗತ್ಯ ಇದೆ. ಹೊಸ ನೇರ ತೆರಿಗೆ ಸಂಹಿತೆ (ಡಿಟಿಸಿ) ಸಿದ್ಧಪಡಿಸಲು ರಚಿಸಲಾಗಿದ್ದ ಅಖಿಲೇಶ್ ರಂಜನ್ ಸಂಚಾಲಕತ್ವದಲ್ಲಿನ ಕಾರ್ಯಪಡೆಯು, ವೈಯಕ್ತಿಕ ಆದಾಯ ತೆರಿಗೆ ದರಗಳಲ್ಲಿ ಬದಲಾವಣೆ ತರಬ ಶಿಫಾರಸು ಮಾಡಿದೆ.